**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್ ಸಿ, ಮಂಗಳೂರು, ದ.ಕ,**

ದಿಃ 29.10.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣಿಕರಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ:-**

ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ.

ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ:-

ಜನನ ಪ್ರಮಾಣ ಪತ್ರವನ್ನು ನಿಪಿ 1 ಎಂದು, ಹಿಂಬರಹವನ್ನು ನಿಪಿ 2 ಎಂದು, ವಾದಿಯ ತಾಯಿಯ ಆಧಾರ್ ಕಾರ್ಡಿನ ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು, ವಾದಿಯ ತಂದೆಯ ಆಧಾರ್ ಕಾರ್ಡಿನ ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು ಗುರುತಿಸಲಾಯಿತು.

(ನಿಪಿ 3 ಮತ್ತು 4 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸರಿಯಾಗಿದೆ ಎಂದು ತಿಳಿದ ಮೇಲೆ ನೋಟರಿ ಪ್ರತಿಗಳನ್ನು ಗುರುತು ಮಾಡಿಕೊಂಡು ಮೂಲ ದಾಖಲೆಗಳನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು )

**ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-**

ಪ್ರಕರಣವು ಏಕಪಕ್ಷೀಯವಾಗಿದ್ದು, ಪ್ರತಿವಾದಿಯವರು ಹಾಜರಿಲ್ಲದ ಕಾರಣ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

**ಮರುವಿಚಾರಣೆಃ ಇಲ್ಲ**

ನನ್ನ ಹೇಳಿಕೆ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

1 ನೇ ಹೆ. ಸಿ. ನ್ಯಾ ಮತ್ತು ಜೆಎಂ ಎಫ್.ಸಿ.,
ಮಂಗಳೂರು.(C/c.)